ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):-

31 (82) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;

(ಆ) ಉಪ ಪ್ರಾಂಶುಪಾಲರ ಹುದ್ದೆ ಇಲ್ಲದೆ ಇರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;

(ಇ) ಉಪ ಪ್ರಾಂಶುಪಾಲರ ಹುದ್ದೆ ಇಲ್ಲದೆ ಇರುವ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಪ್ರೌಢಶಾಲಾ ವಿಭಾಗದಲ್ಲಿ ಆಡಳಿತ ನಿರ್ವಹಣೆಗೆ ತುಂಬಾ ಅಡ್ಡಿ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸರ್ಕಾರಿ ಸಂಯುಕ್ತ ಪದವಿಪೂವ ಕಾಲೇಜುಗಳಲ್ಲಿ ಉಪ ಪ್ರಾಂಶುಪಾಲರ ಹುದ್ದೆಯನ್ನು ಸೃಜಿಸದಿರಲು ಇರುವ ಕಾನೂನಿನ ತೊಡಕುಗಳೇನು; (ವಿವರಗಳೊಡನೆ ನೀಡುವುದು)

(ಉ) ಸರ್ಕಾರಿ ಸಂಯುಕ್ತ ಪದವಿಪೂರ್ವ ಕಾಲೇಜುಗಳಲ್ಲಿ ಪ್ರೌಢಶಾಲಾ ವಿಭಾಗದಲ್ಲಿ ಹಿರಿಯ ಶಿಕ್ಷಕರು ಪ್ರಭಾರ ಮುಖ್ಯ ಶಿಕ್ಷಕರ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಇವರಿಗೆ ಪ್ರಭಾರ ಭತ್ಯೆಯನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಹಾಗಿದ್ದಲ್ಲಿ, ಪ್ರಭಾರ ಭತ್ಯೆಯನ್ನು ನೀಡಲು ಸರ್ಕಾರ ಇದುವರೆವಿಗೆ ತೆಗೆದುಕೊಂಡ ಕ್ರಮಗಳೇನು?